# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 06.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಶ್ರೀ ಯಶವಂತ್ ಸಿ. ವಿ. | ಸಹಾಯಕ ಅಭಿಯಂತರರು, | ಸದಸ್ಯ ಕಾರ್ಯದರ್ಶಿ | ಹಾಜರಿದ್ದರು |
| 3 | ಡಾ॥ ಹರ್ಷಿತ್ ಬಿ. ಎಂ. | ಕೋವಿಡ್ ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
| 4 | ಡಾ॥ ಶ್ರೀನಿವಾಸ್ | ಕೋವಿಡ್ ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
| 5 | ಶ್ರೀಮತಿ ರೇಣುಕಾ | ಕಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 6 | ಶ್ರೀ ಗೋವಿಂದರಾಜು | ಕಂದಾಯ ವಸೂಲಿಗಾರರು | ಸದಸ್ಯರು | ಹಾಜರಿದ್ದರು |
| 7 | ಶ್ರೀ ಆಂಜಿನಪ್ಪ | ಮೇಲ್ವಿಚಾರಕರು ಬಿಡಬ್ಲ್ಯೂಎಸ್‌ಎಸ್‌ಬಿ | ಸದಸ್ಯರು | ಹಾಜರಿದ್ದರು |
| 8 | ತಿರುಪಾಲ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 9 | ಶ್ರೀಮತಿ ವನಮಾಲಾ | ಬಿ.ಎಲ್.ಓ. ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 10 | ಶ್ರೀ ಎಸ್. ಎಂ. ಶಿವಪ್ರಕಾಶ್ | ಬಿ.ಎಲ್.ಓ. ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ. ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**1) ಆರೋಗ್ಯ ಇಲಾಖೆ:-**

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೋವಿಡ್ ವ್ಯಾಕ್ಸಿನ್ ನೀಡಲು ಪ್ರಾರಂಬಿಸಲಾಗಿದ್ದು, ಪ್ರಾಥಮಿಕವಾಗಿ ಕೊರೊನಾ ವಾರಿಯರ್ಸ್‌ಗಳಾದ ಆರೋಗ್ಯ ಸಿಬ್ಬಂದಿಗಳಿಗೆ ಚುಚ್ಚುಮದ್ದು ನೀಡಲಾಗಿದೆ. ಸರ್ಕಾರದ ಮಾರ್ಗಸೂಚಿಯನ್ವಯ ಫೆಬ್ರವರಿ 02ನೇ ವಾರದಿಂದ ಪೌರ ಕಾರ್ಮಿಕರಿಗೆ ಹಾಗೂ ಸಿಬ್ಬಂದಿಗಳಿಗೆ ಚುಚ್ಚುಮದ್ದು ನೀಡುವುದಕ್ಕೆ ಡಾ॥ ಹರ್ಷಿತ್‌ರವರು ಮಾತನಾಡಿ ಸಿಬ್ಬಂದಿಗಳ ಪಟ್ಟಿಯನ್ನು ನೀಡಲು ಸಭೆಯಲ್ಲಿ ಅಧ್ಯಕ್ಷರಿಗೆ ತಿಳಿಸಿದರು.

ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿಟಮಿನ್ ಸಿ ಹಾಗೂ ವಿಟಮಿನ್ ಡಿ 3 ಔಷಧಿಯ ಕೊರತೆಯಿದ್ದು, ಸುಮಾರು ತಿಂಗಳಾದರೂ ಔಷಧಿಯನ್ನು ಪೂರೈಸಲು ಆರೋಗ್ಯ ಇಲಾಖೆ ಗಮನ ಕೊಡದೇ ಇರುವುದು ಕಂಡುಬಂದಿದ್ದು, ಕ್ರಮವಹಿಸಲು ಸೂಚಿಸಲಾಯಿತು.

ಪಲ್ಸ್ ಪೋಲಿಯೋ ಲಸಿಕೆ ಅಭಿಯಾನ ಕಾರ್ಯಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ ಎಂದು ಡಾ॥ ಹರ್ಷಿತ್ ರವರು ಸಭೆಗೆ ಹರ್ಷದಿಂದ ತಿಳಿಸಿದರು. ಸರ್ಕಾರ ನೀಡಿದ್ದ ಲಸಿಕೆ ಗುರಿಯು 4052 ಇದ್ದು, ಆರೋಗ್ಯ ಸಿಬ್ಬಂದಿಗಳು 4247 ಪೋಲಿಯೋ ಲಸಿಕೆಯನ್ನು ನೀಡಿರುತ್ತಾರೆ, ಸರ್ಕಾರ ನಿಗಧಿಪಡಿಸಿದ ಗುರಿಗಿಂತ ಹೆಚ್ಚಾಗಿ ಲಸಿಕೆಯನ್ನು ಆರೋಗ್ಯ ಸಿಬ್ಬಂದಿಗಳು 05 ವರ್ಷದ ಒಳಗಿನ ಮಕ್ಕಳಿಗೆ ನೀಡಿದ್ದು, ಒಟ್ಟು 104% ಗಳಷ್ಟು ಇಂದು ಪೋಲಿಯೋ ಲಸಿಕೆಯ ಅಭಿಯಾನವನ್ನು ಯಶಸ್ವಿಯಾಗಿ ಮುಕ್ತಾಯಗೊಳಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ಎದುರು ಹೆಚ್ಚು ಆಟೋಗಳು ಜಮಾವಣೆಯಾಗುತ್ತಿರುವ ಆರೋಗ್ಯ ಸಿಬ್ಬಂದಿಗಳು ಸಭೆಯಲ್ಲಿ ದೂರು ನೀಡಿದರು. ಇದರಿಂದಾಗಿ ಸಾರ್ವಜನಿಕರಿಗೆ ಓಡಾಡುವುದಕ್ಕೆ ಬಹಳ ತೊಂದರೆಯಾಗುತ್ತಿರುವುದು ಕಂಡುಬಂದಿದ್ದು, ಸದರಿ ದೂರಿನ ಕುರಿತು ವಾರ್ಡ್ ಮಾರ್ಷಲ್‌ಗಳಿಗೆ ಕ್ರಮವಹಿಸಲು ಸೂಚಿಸಲಾಯಿತು.

**2) ಪೌರ ಕಾರ್ಮಿಕರ ಬಗ್ಗೆ:**

ಲಕ್ಷ್ಮಿ, ಪೌರ ಕಾರ್ಮಿಕರ ವೇತನ ಪಾವತಿಯಾಗಿರುವುದಿಲ್ಲ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು. ಇದರ ಬಗ್ಗೆ ನೂಡಲ್ ಅಧಿಕಾರಿಗಳು ಮಾತನಾಡಿ, ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಕ್ರಮವಹಿಸಲು ಸೂಚಿಸುವುದಾಗಿ ತಿಳಿಸಿದರು. ಲಿಂಕ್ ವರ್ಕರ್‌ಗಳ ವೇತನವು ವೇತನ ಪಾವತಿಯಾಗಿರುವುದಿಲ್ಲ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮವಹಿಸಲು ಸೂಚಿಸುವುದಾಗಿ ತಿಳಿಸಿದರು.

ಪೌರ ಕಾರ್ಮಿಕರ ಸ್ವೋರ್ಟ್ಸ್ ಬಿಲ್‌ಗಳ ಸಮಸ್ಯೆಯನ್ನು ಹಿಂದಿನ ಸಭೆಯಲ್ಲಿ ತಿಳಿಸಿದ್ದು, ಅದರಂತೆ, ಮೇಲ್ವಿಚಾಕರು ಮಾತನಾಡಿ, ಪೌರ ಕಾರ್ಮಿಕರ ಸ್ವೋರ್ಟ್ಸ್ ಬಿಲ್ ಚೆಕ್‌ಗಳನ್ನು ವಲಯ ಕಛೇರಿಯಲ್ಲಿ ಪಡೆದಿರುವುದಾಗಿ ತಿಳಿಸಿ, ಮಾನ್ಯ ಅಧ್ಯಕ್ಷರಿಗೆ ವಂದನೆಗಳನ್ನು ತಿಳಿಸಿದರು.

**3) ಬೀದಿ ಬದಿ ವ್ಯಾಪಾರಿಗಳ ತೆರವುಗೊಳಿಸುವ ಬಗ್ಗೆ:-**

ಯಶವಂತಪುರ 1ನೇ ಮುಖ್ಯರಸ್ತೆ ಹಾಗೂ ಬಜಾರ್ ಸ್ಟ್ರೀಟ್ ರೋಡಲ್ಲಿ ಬೀದಿ ಬದಿ ವ್ಯಾಪಾರಿಗಳು ರಸ್ತೆ ಬದಿಯಲ್ಲಿ ತಮ್ಮ ತಳ್ಳುವ ಗಾಡಿಗಳನ್ನು ಇಟ್ಟು ವ್ಯಾಪಾರವನ್ನು ಮಾಡುತ್ತಿರುವುದರಿಂದ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಕಂಡುಬಂದಿರುವುದಾಗಿ ಹಿಂದಿನ ಸಭೆಯಲ್ಲಿ ತಿಳಿಸಿದ್ದರು. ಅದರಂತೆ, ಪೋಲೀಸ್ ಇಲಾಖೆಯ ಸಹಯೋಗದೊಂದಿಗೆ, ಮೇಲ್ವಿಚಾರಕರು ಹಾಗೂ ಗ್ಯಾಂಗ್‌ಮ್ಯಾನ್‌ಗಳು ಬೀದಿ ಬದಿ ವ್ಯಾಪಾರಿಗಳನ್ನು ತೆರವುಗೊಳಿಸುವ ಕಾರ್ಯದಲ್ಲಿ ಪ್ರತಿನಿತ್ಯವು ತೊಡಗಿಸಿಕೊಂಡು, ಟ್ರಾಫಿಕ್ ಸಮಸ್ಯೆ ಹಾಗೂ ಪಾದಚಾರಿಗಳ ಸಮಸ್ಯೆಯನ್ನು ಭಾಗಶ: ಬಗೆಹರಿಸಲಾಗಿದೆ.

**4) ಕಂದಾಯ ಇಲಾಖೆ:**

ಕಂದಾಯ ವಸೂಲಿಗಾರರು ಮಾತನಾಡಿ, ಇಲಾಖೆಯಿಂದ ಜಾರಿ ಮಾಡಲಾದ 583 ನೋಟೀಸ್ ಹಾಗೂ ವಾರೆಂಟ್‌ಗಳಿಗೆ ಸಂಬಂಧಪಟ್ಟಂತೆ ಪ್ರಸ್ತುತ 39.00 ಲಕ್ಷ, ಬಾಕಿ ಕಂದಾಯ 54.00 ಲಕ್ಷ ಒಟ್ಟು 93.00 ಲಕ್ಷಗಳ ಕಂದಾಯವು ವಾರ್ಡಿನಲ್ಲಿ ಬಾಕಿ ಇರುವುದು ಎಂದು ತಿಳಿಸಿದರು.

**5) ಬಿಡಬ್ಲ್ಯೂಎಸ್‌ಎಸ್‌ಬಿ :**

ವಾರ್ಡ್ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್‌ಗಳ ಸುತ್ತ ಹೊಸ ರಿಂಗ್‌ಗಳನ್ನು ಅಳವಡಿಸುತ್ತಿರುವುದರಿಂದ, ಸದರಿ ಕಾರ್ಯ ಮಾಡುವ ಗುತ್ತಿಗೆದಾರರು ಎಲ್ಲಾ ಕಾಮಗಾರಿ ಪೂರ್ಣಗೊಂಡ ನಂತರ ಡೆಬ್ರಿಸ್‌ಗಳನ್ನು ರಸ್ತೆಯಲ್ಲೇ ಬಿಟ್ಟಿದ್ದು ತೆರವುಗೊಳಿಸದಿರುವ ಕಾರಣ, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಕಂಡುಬಂದಿದ್ದು, ಅದರಂತೆ, ಸಭೆಗೆ ಹಾಜರಿದ್ದ, ಬಿಡಬ್ಲ್ಯೂಎಸ್‌ಎಸ್‌ಬಿ ಮೇಲ್ವಿಚಾರಕರಿಗೆ, ಸಹಾಯಕ ಅಭಿಯಂತರರ ಗಮನಕ್ಕೆ ತರಲು ತಿಳಿಸಿ, ಗುತ್ತಿಗೆದಾರರಿಗೆ ಸದರಿ ಡೆಬ್ರಿಸ್‌ಗಳನ್ನು ತುರ್ತಾಗಿ ತೆರವುಗೊಳಿಸುವಂತೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Yashavanth C.V

(ಯಶವಂತ್ ಸಿ. ವಿ.)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಜಿ. ಉಮೇಶ್)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:37